# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1551 (1880)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ರಾಷ್ಟ್ರೀಯ ಹೊಸ ಶಿಕ್ಷಣ ನೀತಿ ಬಗ್ಗೆ

(ಅ) ರಾಷ್ಟ್ರೀಯ ಹೊಸ ಶಿಕ್ಷಣ ನೀತಿ ಜಾರಿಗೊಳಿಸುವ ಚಿಂತನೆ ಸರ್ಕಾರದ ಮುಂದಿದೆಯೇ;

(ಆ) ಹಾಗಾದರೆ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣಕ್ಕೆ ನಿಗಧಿಗೊಳಿಸಲು ಉದ್ದೇಶಿಸಿರುವ ತರಗತಿಗಳು ಯಾವುವು; (ವಿವರಗಳನ್ನು ನೀಡುವುದು)

(ಇ) ಶಿಕ್ಷಣದ ಹಂತಗಳಿಗೆ ಅನುಗುಣವಾಗಿ ಶಿಕ್ಷಕರಿಗೆ ನಿಗದಿಗೊಳಿಸಿರುವ ವಿದ್ಯಾರ್ಹತೆ ಏನು; (ವಿವರಗಳನ್ನು ನೀಡುವುದು)

(ಈ) ಆಯಾ ಹಂತಗಳಿಗೆ ನಿಗದಿಗೊಳಿಸಲಾದ ವಿದ್ಯಾರ್ಹತೆ ಹೊಂದಿರದ ಶಿಕ್ಷಕರಿಗೆ ವಿದ್ಯಾರ್ಹತೆ ಹೊಂದಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಸದರಿ ಶಿಕ್ಷಕರುಗಳಿಗೆ ಮುಂಬಡ್ತಿ ನೀಡಿ, ಮರು ಹೊಂದಾಣಿಕೆ ಮಾಡುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;

(ಊ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ನಿಗದಿಗೊಳಿಸಲು ಉದ್ದೇಶಿಸಿರುವ ತರಗತಿಗಳಿಗೆ ಅನುಗುಣವಾಗಿ ವಿಷಯ ಪರಿವೀಕ್ಷಕರು, ಶಿಕ್ಷಣ ಸಂಯೋಜಕರು, ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳು, ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿಗಳನ್ನು ನಿಯೋಜಿಸಲು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)